# ಕರ್ನಾಟಕ ಸರ್ಕಾರದ ನಡವಳಿಗಳು

## ಜಲ ಸಂಪನ್ಮೂಲ ಇಲಾಖೆ

**ವಿಷಯ:-** ಮಾನ್ವಿ ತಾಲ್ಲೂಕಿನ ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡಕ್ಕಾಗಿ ಕರ್ನಾಟಕ ನೀರಾವರಿ ನಿಗಮದ ಅಧೀನದಲ್ಲಿರುವ ಸರ್ವೆ ನಂ.456 ಮತ್ತು 463ರಲ್ಲಿ ಬರುವ ಒಟ್ಟು 7 ಎಕರೆ 28 ಗುಂಟೆ ಪೈಕಿ 4 ಎಕರೆ ವಿಸ್ತೀರ್ಣದ ಜಮೀನನ್ನು ಕಂದಾಯ ಇಲಾಖೆಗೆ ನೀಡಿ, ಕಂದಾಯ ಇಲಾಖೆಗೆ ಸೇರಿದ ನಂದಿಹಾಳ ಗ್ರಾಮದ ಸರ್ವೆ ನಂ.3ರಲ್ಲಿನ 8 ಎಕರೆ ಜಮೀನನ್ನು ಕರ್ನಾಟಕ ನೀರಾವರಿ ನಿಗಮಕ್ಕೆ ವರ್ಗಾಯಿಸಿ ಅದಲು ಬದಲು ಮಾಡಿಕೊಳ್ಳುವ ಬಗ್ಗೆ.

***

**ಓದಲಾಗಿದೆ:-**1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ಬೆಂಗಳೂರು ಇವರ ಪತ್ರ ಸಂಖ್ಯೆ:ಕನೀನಿನಿ/ಕೇಕ/ಎಎಸ್‌ಟಿ/ಸಿ.11/428/ 2016-17/7545 ದಿನಾಂಕ:30.03.2019.

---***---

**ಪ್ರಸ್ತಾವನೆ:**

ಸ್ಥಳೀಯ ಜನ ಪ್ರತಿನಿಧಿಗಳು, ಮಾನ್ಯ ಮುಖ್ಯಮಂತ್ರಿಗಳಿಗೆ ನೀಡಿರುವ ದಿನಾಂಕ: 4-10-2016ರ ಪತ್ರದಲ್ಲಿ ಮಾನ್ವಿ ತಾಲ್ಲೂಕಿನ ಕಂದಾಯ ಇಲಾಖೆಯ ಮಿನಿ ವಿಧಾನಸೌಧ ಕಟ್ಟಡಕ್ಕಾಗಿ ಕರ್ನಾಟಕ ನೀರಾವರಿ ನಿಗಮದ ಅಧೀನದಲ್ಲಿರುವ 4 ಎಕರೆ ಜಮೀನನ್ನು ನೀಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮರವರು, ಮೇಲೆ ಓದಲಾದ (1)ರ ಪತ್ರದಲ್ಲಿ ಕರ್ನಾಟಕ ನೀರಾವರಿ ನಿಗಮಕ್ಕೆ ಸೇರಿದ ಸರ್ವೆ ನಂ.456 ಮತ್ತು 463ರಲ್ಲಿ ಬರುವ ಒಟ್ಟು 7 ಎಕರೆ 28 ಗುಂಟೆ ಪೈಕಿ 4 ಎಕರೆ ವಿಸ್ತೀರ್ಣದ ಜಮೀನನ್ನು, ಸಾರ್ವಜನಿಕ ಹಿತಾಸಕ್ತಿಗೋಸ್ಕರ ಮಾನ್ವಿ ತಾಲ್ಲೂಕಿನ ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕಾಗಿ ಕಂದಾಯ ಇಲಾಖೆಗೆ ಹಸ್ತಾಂತರಿಸಲು ಹಾಗೂ ಇದಕ್ಕೆ ಪರ್ಯಾಯವಾಗಿ ಕಂದಾಯ ಇಲಾಖೆಗೆ ಸೇರಿದ ನಂದಿಹಾಳ ಗ್ರಾಮದ ಸರ್ವೆ ನಂ.3ರಲ್ಲಿನ 8 ಎಕರೆ ಜಮೀನನ್ನು, ಕರ್ನಾಟಕ ನೀರಾವರಿ ನಿಗಮಕ್ಕೆ ವರ್ಗಾಯಿಸಿ ಅದಲು ಬದಲು ಮಾಡಿಕೊಳ್ಳಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 57 ಎಂಟಿಪಿ 2016 ಬೆಂಗಳೂರು,**
**ದಿನಾಂಕ:27.09.2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಕರ್ನಾಟಕ ನೀರಾವರಿ ನಿಗಮಕ್ಕೆ ಸೇರಿದ ಮಾನ್ವಿ ಗ್ರಾಮದ ಸರ್ವೆ ನಂ.456 ಮತ್ತು 463ರಲ್ಲಿ ಬರುವ ಒಟ್ಟು 7 ಎಕರೆ 28 ಗುಂಟೆ ಪೈಕಿ 4 ಎಕರೆ ವಿಸ್ತೀರ್ಣದ ಜಮೀನನ್ನು, ಸಾರ್ವಜನಿಕ ಹಿತಾಸಕ್ತಿಗೋಸ್ಕರ ಮಾನ್ವಿ ತಾಲ್ಲೂಕಿನ, ಮಾನ್ವಿ ಪಟ್ಟಣದಲ್ಲಿ ಮಿನಿ ವಿಧಾನಸೌಧ ಕಟ್ಟಡ ನಿರ್ಮಾಣಕ್ಕಾಗಿ ಕಂದಾಯ ಇಲಾಖೆಗೆ ಹಸ್ತಾಂತರಿಸಿ, ಇದಕ್ಕೆ

-2

ಪರ್ಯಾಯವಾಗಿ ಕಂದಾಯ ಇಲಾಖೆಗೆ ಸೇರಿದ ನಂದಿಹಾಳ ಗ್ರಾಮದ ಸರ್ವೆ ನಂ.3ರಲ್ಲಿನ 8 ಎಕರೆ ಜಮೀನನ್ನು ಕರ್ನಾಟಕ ನೀರಾವರಿ ನಿಗಮಕ್ಕೆ ವರ್ಗಾಯಿಸಿ, ಅದಲು ಬದಲು ಮಾಡಿಕೊಳ್ಳಲು ಸರ್ಕಾರದ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಕಂದಾಯ ಇಲಾಖೆಯು ಟಿಪ್ಪಣಿ ಸಂಖ್ಯೆ: ಆರ್‌ಡಿ 28 ಎಲ್‌ಜಿಆರ್2017 ದಿನಾಂಕ: 23-04-2018ರಲ್ಲಿ ಮತ್ತು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 372 ಆಕೋ-1/ 2019, ದಿನಾಂಕ:15.07.2019ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

27/9/19

**(ಶ್ರೀಹರಿ ಎಸ್.ಆರ್)**
**ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1).**
**ಜಲ ಸಂಪನ್ಮೂಲ ಇಲಾಖೆ**

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಾಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2. ಪ್ರಧಾನ ಮಹಾಲೇಖಾಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ ಹೊಸ ಕಟ್ಟಡ ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
3. ಪ್ರಧಾನ ಮಹಾಲೇಖಾಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ ಬೆಂಗಳೂರು-01.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
5. ಮಾನ್ಯ ಮುಖ್ಯ ಮಂತ್ರಿಗಳ ಆಪ್ತಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಕರ್ನಾಟಕ ನೀರಾವರಿ ನಿಗಮ ನಿಯಮಿತ, ನೀರಾವರಿ ಕೇಂದ್ರ ವಲಯ, ಮುನಿರಾಬಾದ್, ಹೊಸಪೇಟೆ, ಬಳ್ಳಾರಿ
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ ಬೆಂಗಳೂರು.
9. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ (ಸಚಿವ ಸಂಪುಟ), ವಿಧಾನಸೌಧ, (ಪ್ರಕರಣ ಸಂಖ್ಯೆ: 535 /2019 ದಿನಾಂಕ:18/09/2019)
10. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.